**ದಿನಾಂಕ: 08.11.2021 ರಂದು ಬೆಳಿಗ್ಗೆ 11.00ಗಂಟೆಗೆ ಮಾನ್ಯ ಜಿಲ್ಲಾಧಿಕಾರಿಗಳು ಬೆಂಗಳೂರು ನಗರ ಜಿಲ್ಲೆ ರವರ ಅಧ್ಯಕ್ಷತೆಯಲ್ಲಿ ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮದಡಿ ರೈತ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡುವ ಬಗ್ಗೆ ನಡೆದ ಸಭಾ ನಡವಳಿಗಳು**

**ಹಾಜರಾತಿ** :-

1. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಬೆಂಗಳೂರು ಜಿಲ್ಲೆ.
2. ಜಂಟಿ ಕೃಷಿ ನಿರ್ದೇಶಕರು, ಬೆಂಗಳೂರು.
3. ಉಪ ಕೃಷಿ ನಿರ್ದೇಶಕರು, ಬೆಂಗಳೂರು.
4. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ವಿಭಾಗ, ಬೆಂಗಳೂರು
5. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ.
6. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ.
7. ಉಪ ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಗಳೂರು.
8. ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
9. ಉಪ ನಿಬಂಧಕರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವ ವಿದ್ಯಾಲಯ, ಬೆಂಗಳೂರು.
10. ಜಿಲ್ಲಾ ಮಟ್ಟದ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
11. ಜಿಲ್ಲಾ ಅಲ್ಪಸಂಖ್ಯಾತರ ಅಭಿವೃದ್ಧಿ ಅಧಿಕಾರಿಗಳು, ಬೆಂಗಳೂರು.
12. ಅಧಿಕಾರಿಗಳು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು.
13. ವ್ಯವಸ್ಥಾಪಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

ಶ್ರೀ ಜಯಸ್ವಾಮಿ ಜಿ.ಎಸ್. ಜಂಟಿ ಕೃಷಿ ನಿರ್ದೇಶಕರು, ಬೆಂಗಳೂರು ರವರು ಸಭೆಗೆ ಹಾಜರಿದ್ದ ಅಧ್ಯಕ್ಷರು ಹಾಗೂ ಎಲ್ಲಾ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಜಂಟಿ ಕೃಷಿ ನಿರ್ದೇಶಕರು ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮದಡಿ ರೈತ ಮಕ್ಕಳಿಗೆ ವಿದ್ಯಾರ್ಥಿವೇತನ ರೂಪುರೇಷೆಗಳನ್ವಯ 10ನೇ ತರಗತಿಯನ್ನು ಪೂರ್ಣಗೊಳಿಸಿದ ನಂತರ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ, ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರುವ ಕರ್ನಾಟಕ ರಾಜ್ಯದ ರೈತರ ಎಲ್ಲಾ ಮಕ್ಕಳ ಬ್ಯಾಂಕ್‌ಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Tranfer-DBT) ಪದ್ಧತಿಯ ಮೂಲಕ 2021–22ನೇ ಆರ್ಥಿಕ ವರ್ಷದ ಸಾಲಿನಿಂದ ಜಾರಿಗೆ ಬರುವಂತೆ ಶಿಷ್ಯವೇತನದ ಹಣದ ಮೊತ್ತವನ್ನು ವಾರ್ಷಿಕ ಶಿಷ್ಯವೇತನ (Scholarship ) ರೂಪದಲ್ಲಿ ಒದಗಿಸಲಾಗುತ್ತದೆ.

**ಈ ಶಿಷ್ಯವೇತನಕ್ಕೆ, ಈ ಕೆಳಕಂಡ ಅರ್ಹವಿವರಣೆಗಳನ್ನು ಪರಿಗಣಿಸತಕ್ಕದ್ದು.**

ಅ) ರೈತ (Farmer ) ಎಂದರೆ ರಾಜ್ಯದ ಯಾವುದೇ ಭಾಗದಲ್ಲಿ ಉಳುಮೆ ಮಾಡುವಂತಹ/ಕೃಷಿ ಮಾಡುವಂತಹ ಜಮೀನನ್ನು ತನ್ನ ಹೆಸರಿನಲ್ಲಿ ಹೊಂದಿರುವಂತಹ ವ್ಯಕ್ತಿ.

ಆ) ಮಕ್ಕಳು ಎಂದರೆ ಕಾನೂನಿನ ಪ್ರಕಾರ ದತ್ತು ಪಡೆದಿರುವ ಮಕ್ಕಳು ಸೇರಿದಂತೆ ಪೋಷಕ/ಪೋಷಕರ ಜೈವಿಕ ಸಂತತಿ. ಒಂದು ಪಕ್ಷ ಮಾಡುವಂತಹ/ ಕೃಷಿ ಮಾಡುವಂತಹ ಜಮೀನನ್ನು ಅವರು ಹೊಂದಿರತಕ್ಕದ್ದು.

**ಈ ಶಿಷ್ಯವೇತನವು (Scholarship) ಈ ಮುಂದಿನ ಷರತ್ತುಗಳನ್ನು ಒಳಗೊಂಡಿರುತ್ತದೆ.**

1) ರೈತರ ಮಕ್ಕಳು ಕರ್ನಾಟಕ ರಾಜ್ಯದ ಅನುದಾನದಿಂದ ಪಾವತಿಸುವಂತಹ ಒಂದು ಶಿಷ್ಯವೇತನಕ್ಕೆ ಮಾತ್ರ ಅರ್ಹರಾಗುತ್ತಾರೆ.

2) ರೈತರ ಮಕ್ಕಳ ತಂದೆ–ತಾಯಿ ಇಬ್ಬರೂ ಕೃಷಿ ಜಮೀನಿನ ಒಡೆಯರಾಗಿದ್ದರೆ, ಈ ಯೋಜನೆಯಲ್ಲಿ ಒಂದು ಶಿಷ್ಯವೇತನಕ್ಕೆ ಮಾತ್ರ ರೈತರ ಮಕ್ಕಳು ಅರ್ಹರಾಗಿರುತ್ತಾರೆ.

3) ಈ ಶಿಷ್ಯವೇತನವು ಶಿಕ್ಷಣದ ಯಾವುದೇ ಕೋರ್ಸಿನ ಸೆಮಿಸ್ಟರ್/ಶೈಕ್ಷಣಿಕ ವರ್ಷಗಳಿಗೆ ಮಿತಿಯಾಗಿರತಕ್ಕದ್ದು. ಕೋರ್ಸ್‌ನ ಸೆಮಿಸ್ಟರ್‌ನಲ್ಲಿ /ಶೈಕ್ಷಣಿಕ ವರ್ಷದಲ್ಲಿ ಅನುತ್ತೀರ್ಣ ಹೊಂದಿ ಪುನ: ಆ ಸೆಮಿಸ್ಟರ್/ಶೈಕ್ಷಣಿಕ ವರ್ಷದಲ್ಲಿ ವಿದ್ಯಾಭ್ಯಾಸದ ಪುನರಾವರ್ತನೆಯಾದರೆ (ಪುನ: ಪರೀಕ್ಷೆ ತೆಗೆದುಕೊಂಡರೆ) ವಿದ್ಯಾರ್ಥಿಗಳು ಶಿಷ್ಯವೇತನವನ್ನು ಪಡೆಯಲು ಅರ್ಹರಾಗಿರುವುದಿಲ್ಲ.

4) ಈ ಶಿಷ್ಯವೇತನವನ್ನು ಯಾವುದಾದರೂ ಒಂದು ವಿಧದ ಕೋರ್ಸ್‌ಗೆ ನೀಡಲಾಗುವುದು. ಉದಾಹರಣೆಗೆ: X ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ Y ಎಂಬ ಸ್ನಾತಕೋತ್ತರ ಕೋರ್ಸ್‌ಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ ಈ ಕೋರ್ಸ್‌ಗೆ ಶಿಷ್ಯವೇತನವನ್ನು ಪಡೆಯಲು ಅರ್ಹವಾಗುವುದಿಲ್ಲ.

**ಮಾನ್ಯ ಜಿಲ್ಲಾಧಿಕಾರಿಗಳು ಸೂಚನೆಯಂತೆ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಈ ಕೆಳಕಂಡ ಸೂಚನೆಗಳು ಪಾಲಿಸಲು ಸೂಚಿಸಿದೆ.**

1) ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ SSP (Student Scholarship portal)ನಲ್ಲಿ ನೊಂದಣಿ ಮಾಡಿಸುವುದು.

2) ಎಲ್ಲಾ ಅರ್ಹ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡುವುದು ಮತ್ತು SATS Portal ನಲ್ಲಿ ಆಧಾರ್ ಜೋಡಣೆ ಮಾಡುವುದು.

3) ಮುಖ್ಯ ಮಂತ್ರಿ ವಿದ್ಯಾನಿಧಿ ಯೋಜನೆಯ ವಿದ್ಯಾರ್ಥಿ ವೇತನ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವುದು.

4) ಕಾಲೇಜಿಗೆ ಒಂದರಂತೆ ನೋಡಲ್ ಅಧಿಕಾರಿ ನೇಮಿಸಿ ಕಾರ್ಯಕ್ರಮ ಉಸ್ತುವಾರಿ ಮಾಡುವುದು.

5) ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಅಧಿಕಾರಿಗಳನ್ನು ತಮ್ಮ ವ್ಯಾಪ್ತಿಯ ವಿವಿಧ ಕಾಲೇಜುಗಳಿಗೆ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಿ ಮೇಲೆ ತಿಳಿಸಿರುವ ಅಂಶಗಳ ಬಗ್ಗೆ ಕ್ರಮ ವಹಿಸುವುದು.

6) ಮುಖ್ಯಮಂತ್ರಿ ವಿದ್ಯಾನಿಧಿ ಕಾರ್ಯಕ್ರಮ ಹಾಗೂ ಮೇಲೆ ತಿಳಿಸಿರುವ ಅಂಶಗಳ ಬಗ್ಗೆ Jingles, Posters ಹಾಗೂ Bulk Messages ಮೂಲಕ ಕಾಲೇಜುಗಳಲ್ಲಿ ಪ್ರಾಂಶುಪಾಲರು ವ್ಯಾಪಕ ಪ್ರಚಾರ ಕೈಗೊಳ್ಳಲು ಇಲಾಖಾ ಮುಖ್ಯಸ್ಥರಿಗೆ ಸೂಚಿಸಿದರು.

7) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಗೆ ಬರುವ ಎಲ್ಲಾ ಪದವಿ ಮತ್ತು ಸಂಬಂಧಿಸಿದ ಕೋರ್ಸ್‌ಗಳ ವಿಶ್ವ–ವಿದ್ಯಾಲಗಳಿಗೆ ಜಂಟಿ ನಿರ್ದೇಶಕರು, Collegiate Education ರವರು ಕಾರ್ಯಕ್ರಮ ಅನುಷ್ಠಾನದ ಬಗ್ಗೆ ತಮ್ಮ ಅಧೀನ ಅಧಿಕಾರಿಗಳಿಗೆ ವಿಡಿಯೋ ಸಂವಾದ ಏರ್ಪಡಿಸಿ ಮಾನ್ಯ ಮುಖ್ಯಮಂತ್ರಿಗಳ ಪ್ರಮುಖ ಕಾರ್ಯಕ್ರಮವಾಗಿರುವುದರಿಂದ ಆದ್ಯತೆ ಮೇರೆಗೆ ಒಂದುವಾರದೊಳಗೆ(ದಿನಾಂಕ: 19.11.2021 ರೊಳಗೆ) ಶೇ.100 ಅರ್ಹ ರೈತ ವಿದ್ಯಾರ್ಥಿಗಳನ್ನು ನೋಂದಾಯಿಸಲು ಕ್ರಮ ವಹಿಸಲು ಸೂಚಿಸುವುದು.

ಜಂಟಿ ಕೃಷಿ ನಿರ್ದೇಶಕರು
ಬೆಂಗಳೂರು.

ಜಿಲ್ಲಾಧಿಕಾರಿಗಳು
ಬೆಂಗಳೂರು ನಗರ ಜಿಲ್ಲೆ.